**ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ, ಡಾ. ತಳವಾರ ಸಾಬಣ್ಣಾ, ಶ್ರೀ ಶಶೀಲ್ ನಮೋಶಿ ಮತ್ತು ಜಗದೇವ ಗುತ್ತೇದರ್ ರವರಗಳು ನಿಯಮ-330ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರ**

**ವಿಷಯ:**

ಭೀಮಾ ನದಿ ಶ್ರೀಮಂತ ಇತಿಹಾಸ ಹೊಂದಿದೆ ಹಾಗೂ ಪ್ರಸಿದ್ಧ ಧಾರ್ಮಿಕ ಕ್ಷೇತ್ರಗಳು ಭೀಮೆಯ ತಟದಲ್ಲಿವೆ. ಭೀಮಾ ನದಿ 786 ಕಿ.ಮೀಗಳ ಒಟ್ಟು ಹರಿವಿನಲ್ಲಿ ಕರ್ನಾಟಕದಲ್ಲಿ 259 ಕಿ.ಮೀ ಹರಿಯುವ ಭೀಮಾ ನದಿ ನೀರನ್ನು ನಂಬಿಕೊಂಡು 164 ಹಳ್ಳಿಗಳ ಜನರು ಬದುಕುತ್ತಿದ್ದಾರೆ. ಬೇಸಿಗೆ ಕಾಲದಲ್ಲಿ ನದಿ ನೀರಿನ ಕೊರತೆಯಿಂದ ರೈತರು ಬೆಳೆದ ಲಕ್ಷಾಂತರ ಎಕರೆ ಕಬ್ಬು ಮತ್ತು ಇತರೆ ಬೆಳೆಗಳು ಓಣಗಿ ಹೋಗಿ ರೈತರು ಸಂಕಷ್ಟದ ಪರಿಸ್ಥಿತಿ ಎದುರಿಸುತ್ತಿದ್ದಾರೆ. 1976 ರಲ್ಲಿ ನ್ಯಾಯಮೂರ್ತಿ ಬಚಾವತ್ ಆಯೋಗದ ತೀರ್ಪಿನಂತೆ ಮಹಾರಾಷ್ಟ್ರಕ್ಕೆ 95 ಟಿಎಂಸಿ ಮತ್ತು ಕರ್ನಾಟಕಕ್ಕೆ 15 ಟಿಎಂಸಿ ನೀರು ಬಳಕೆ ಮಾಡಿಕೊಳ್ಳಬೇಕಿತ್ತು, ಮಹಾರಾಷ್ಟ್ರ ರಾಜ್ಯ ಭೀಮಾ ನದಿಯ ನೀರನ್ನು ಅಕ್ರಮವಾಗಿ ಸುರಂಗ ಮಾರ್ಗದ ಮೂಲಕ ಸೀನಾ ನದಿಗೆ ಸೇರಿಸಿಕೊಳ್ಳುವುದರ ಜೊತೆಗೆ ಅನಧೀಕೃತ ಬ್ಯಾರೇಜ್‌ಗಳನ್ನು ನಿರ್ಮಿಸಿ 95 ಟಿಎಂಸಿ ಗಿಂತಲೂ ಹೆಚ್ಚಿನ ನೀರನ್ನು ಬಳಸಿಕೊಳ್ಳುತ್ತಿದ್ದಾರೆ. ಮಹಾರಾಷ್ಟ್ರ ರಾಜ್ಯವು ತನ್ನ ಪಾಲಿನ 95 ಟಿಎಂಸಿ ಗಿಂತ ಹೆಚ್ಚು ನೀರನ್ನು ಬಳಕೆ ಮಾಡಿಕೊಳ್ಳುತ್ತಿರುವ ಬಗ್ಗೆ ಕರ್ನಾಟಕ ರಾಜ್ಯವು ನಿಯೋಗವನ್ನು ಕಳುಹಿಸಿ ವಾಸ್ತವಿಕ ಸತ್ಯಾಸತ್ಯತೆಯ ಅಂಕಿ-ಅಂಶಗಳ ವರದಿ ತರಿಸಿಕೊಳ್ಳಬೇಕು. ಕಳೆದ ವರ್ಷದ ಬೇಸಿಗೆಯಲ್ಲಿ ಬೀಮಾನದಿ ನೀರು ಸಂಪೂರ್ಣ ಬತ್ತಿ ಹೋಗಿದ್ದರಿಂದ ಕಲಬುರಗಿ ಜಿಲ್ಲೆಯ ರೈತರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆಯಾಗಿತ್ತು. ನಂತರ ಭೀಮಾ ತೀರದ ಜನರು ಒಟ್ಟಾಗಿ ಅಮರಣಾಂತ ಉಪವಾಸ ಸತ್ಯಾಗ್ರಹ ಮಾಡಿ ಕುಡಿಯಲು ಬೇಕಾಗುವ ನೀರನ್ನು ಬಿಡಿಸಿಕೊಳ್ಳಲಾಗಿತ್ತು. ಕನಿಷ್ಟ ಕುಡಿಯುವ ನೀರಿಗೂ ಸಂಕಷ್ಟಕ್ಕೆ ಸಿಲುಕುತ್ತಿರುವ ಕಲಬುರಗಿ ಜಿಲ್ಲೆಯ ಜನರಿಗೆ 15 ಟಿಎಂಸಿ ನೀರನ್ನು ಸಮರ್ಪಕವಾಗಿ ಬಳಕೆಯಾಗುವಂತೆ ಕ್ರಮ ವಹಿಸುವ ಕುರಿತು.

**ಉತ್ತರ:**

ಕೃಷ್ಣಾ ಜಲ ವಿವಾದ ನ್ಯಾಯಾಧಿಕರಣ-I (ಬಚಾವತ್ ನ್ಯಾಯಾಧಿಕರಣ) 1976 ರಲ್ಲಿ ನೀಡಿರುವ ಅಂತಿಮ ತೀರ್ಪಿನ Clause-IX(A)(ii) ಪ್ರಕಾರ ಮಹಾರಾಷ್ಟ್ರ ರಾಜ್ಯವು ಭೀಮಾ ಮುಖ್ಯ ನದಿಯಿಂದ 95.00 ಟಿ.ಎಂ.ಸಿ.ಗಿಂತ ಹೆಚ್ಚಾಗಿ ನೀರನ್ನು ಬಳಸಬಾರದೆಂದು ನಿರ್ಬಂಧವಿದೆ. ಅಂತೆಯೇ Clause-IX(B)(iii) ಪ್ರಕಾರ ಕರ್ನಾಟಕ ರಾಜ್ಯವು ಭೀಮಾ ಮುಖ್ಯ ನದಿಯಿಂದ 15.00 ಟಿ.ಎಂ.ಸಿ.ಗಿಂತ ಹೆಚ್ಚಾಗಿ ಬಳಸಬಾರದೆಂದು ನಿರ್ಬಂಧವಿದೆ.

ಕೃಷ್ಣಾ ಜಲವಿವಾದ ನ್ಯಾಯಾಧಿಕರಣ-I ವಿಧಿಸಿರುವ ನಿರ್ಬಂಧಕ್ಕೆ ಒಳಪಟ್ಟು, ಇದರ ಪರಿಮಿತಿಯಲ್ಲಿ ಕಣಿವೆ ರಾಜ್ಯಗಳು ಯೋಜನೆಗಳನ್ನು ಕೈಗೊಂಡಿರುತ್ತವೆ.

ಸೀನಾ ನದಿಯು ಮಹಾರಾಷ್ಟ್ರದ ಭೀಮಾ ನದಿಯ ಒಂದು ಉಪ ನದಿಯಾಗಿರುತ್ತದೆ. ಕೃಷ್ಣಾ ಜಲ ವಿವಾದ ನ್ಯಾಯಾಧಿಕರಣ-II ರ ಮುಂದೆ ಮಹಾರಾಷ್ಟ್ರ ರಾಜ್ಯವು ಸಲ್ಲಿಸಿರುವ ಮಾಹಿತಿಯ ಪ್ರಕಾರ ಮಹಾರಾಷ್ಟ್ರ ರಾಜ್ಯವು ಉಜ್ಜನಿ ಜಲಾಶಯದಿಂದ ನೀರನ್ನು ಸೀನಾ ನದಿಗೆ ತಿರುವುಗೊಳಿಸುತ್ತಿದೆ ಹಾಗೂ ಸದರಿ ಯೋಜನೆಯನ್ನು ಮಹಾರಾಷ್ಟ್ರ ರಾಜ್ಯಕ್ಕೆ ಮುಖ್ಯ ಭೀಮಾ ನದಿಯಲ್ಲಿ ನೀರನ್ನು ಬಳಸಲು ವಿಧಿಸಿರುವ ನಿರ್ಬಂಧದಡಿಯಲ್ಲಿ ಕೈಗೊಂಡಿರುವುದಾಗಿ ತಿಳಿದು ಬಂದಿದೆ.

ಭೀಮಾ ಮುಖ್ಯ ನದಿಯಲ್ಲಿ ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳು ನೀರನ್ನು ಬಳಸಿಕೊಳ್ಳಲು, ಮಿತಿಗೊಳಿಸಿರುವ ಪ್ರಮಾಣಕ್ಕೆ ಯೋಜನೆಗಳನ್ನು ರೂಪಿಸಿರುತ್ತವೆ. ಕರ್ನಾಟಕ ರಾಜ್ಯಕ್ಕೆ ಮುಖ್ಯ ಭೀಮಾ ನದಿಯಡಿ ಹಂಚಿಕೆ ಮಾಡಿರುವ (ಕೃಷ್ಣಾ ಜಲವಿವಾದ ನ್ಯಾಯಾಧಿಕರಣ- I) 15.00 TMC ನೀರನ್ನು ಸಮರ್ಪಕವಾಗಿ ಬಳಕೆ ಮಾಡಲು ಕೃಷ್ಣಾ ಭಾಗ್ಯ ಜಲ ನಿಗಮ ಹಾಗೂ ಕರ್ನಾಟಕ ನೀರಾವರಿ ನಿಗಮ ವತಿಯಿಂದ ಒಟ್ಟು 06 ಬ್ಯಾರೇಜ್‌ಗಳನ್ನು ನಿರ್ಮಿಸಲಾಗಿದ್ದು, ವಿವರಗಳು ಈ ಕೆಳಕಂಡಂತಿವೆ:

| ಕ್ರ ಸಂ | ಬ್ಯಾರೇಜ್ | ಜಿಲ್ಲೆ | ಹಂಚಿಕೆಯಾದ ನೀರಿನ ಪ್ರಮಾಣ (ಟಿ.ಎಂ.ಸಿ) | ಅಚ್ಚುಕಟ್ಟು ಕ್ಷೇತ್ರ (ಹೆಕ್ಟೇರ್‌ಗಳಲ್ಲಿ) | ಷರಾ |
|---|---|---|---|---|---|
| (1) | ಘತ್ತರಗಾ | ಕಲಬುರಗಿ | 1.25 | 1,890 | ಸದರಿ ಬ್ಯಾರೇಜ್ ಕಾಮಗಾರಿಗಳು |
| (2) | ಕಲ್ಲೂರು | ಕಲಬುರಗಿ | 1.45 | 2,500 | ಪೂರ್ಣಗೊಂಡಿದ್ದು, ಬ್ಯಾರೇಜಿನಡಿ |

| ಕ್ರ ಸಂ | ಬ್ಯಾರೇಜ್ | ಜಿಲ್ಲೆ | ಹಂಚಿಕೆಯಾದ ನೀರಿನ ಪ್ರಮಾಣ (ಟಿ.ಎಂ.ಸಿ) | ಅಚ್ಚುಕಟ್ಟು ಕ್ಷೇತ್ರ (ಹೆಕ್ಟೇರ್‌ಗಳಲ್ಲಿ) | ಷರಾ |
|---|---|---|---|---|---|
| (3) | ಯಾದಗಿರ | ಯಾದಗಿರಿ | 1.01 | 1,935 | ಶೇಖರಣೆಗೊಂಡ ನೀರನ್ನು ರೈತರು ತಮ್ಮ ಸ್ವಂತ ಪಂಪ್‌ಸೆಟ್ ಬಳಸಿ ನೀರಾವರಿ ಬಳಸುತ್ತಿದ್ದಾರೆ. |
| (4) | ಜೋಳದಡಗಿ | ಯಾದಗಿರಿ | 1.29 | 1,856 | |
| (5) | ಸನ್ನತಿ | ಯಾದಗಿರಿ | 4.00 | 16,000 | ಸದರಿ ಬ್ಯಾರೇಜ್ ನಡಿ ಸಂಗ್ರಹಗೊಂಡ ನೀರನ್ನು ಲಿಫ್ಟ್ ಮುಖಾಂತರ ಸನ್ನತಿ ಏತ ನೀರಾವರಿ ಯೋಜನೆಯ ಅಚ್ಚುಕಟ್ಟು ಕ್ಷೇತ್ರಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವುದಾಗಿದ್ದು, ಪ್ರಸ್ತುತ ಕಾಮಗಾರಿ ಪೂರ್ಣಗೊಂಡಿದೆ. ಪ್ರಾಯೋಗಿಕವಾಗಿ ನೀರು ಹರಿಸಲಾಗಿದೆ. |
| (6) | ಸೊನ್ನ | ಕಲಬುರಗಿ | 6.00 | 24,292 | ಪ್ರಸ್ತುತ ಯೋಜನೆ ಪೂರ್ಣಗೊಂಡಿದ್ದು, ಬಳೂಂಡಗಿ & ಅಳ್ಳಗಿ ಲಿಫ್ಟ್ ಮೂಲಕ ನೀರನ್ನು ಎತ್ತಿ ಕಾಲುವೆ ಮೂಲಕ ಹರಿಸಲಾಗುತ್ತಿದೆ. |
| | | **ಒಟ್ಟು** | **15.00** | **48,473** | |

ಭೀಮಾ ನದಿ ಪಾತ್ರದಡಿ ಬರುವ ಮೇಲಿನ 06 ಬ್ಯಾರೇಜುಗಳಲ್ಲಿ ಬೇಸಿಗೆಯಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಪೂರೈಕೆ ಮಾಡುವಷ್ಟು ಪ್ರಮಾಣದ ನೀರನ್ನು ಸಂಗ್ರಹಿಸಲಾಗಿದ್ದು, ಅದನ್ನು ಸಮರ್ಪಕವಾಗಿ ಬಳಸಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ. ನೀರಿನ ಕೊರತೆಯಾದ ಜಲವರ್ಷಗಳಲ್ಲಿ ಕುಡಿಯುವ ಹಾಗೂ ಇತರೆ ಅಗತ್ಯಗಳಿಗೆ ಮಹಾರಾಷ್ಟ್ರ ರಾಜ್ಯದಿಂದ ನೀರನ್ನು ಪಡೆಯಲು ಕ್ರಮ ವಹಿಸಲಾಗುವುದು.

(ಜಸಂಇ 22 ಡಬ್ಲ್ಯೂಬಿಎಂ 2025)

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿಗಳು